## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **1598 (1850)**
ಸದಸ್ಯರ ಹೆಸರು : ಶ್ರೀ ಪ್ರತಾಪ ಸಿಂಹ ನಾಯಕ್ ಕೆ.
(ವಿಧಾನಸಭೆ ಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 23.03.2026
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಮೌಲ್ಯ ಶಿಕ್ಷಣವನ್ನು ಜಾರಿಗೊಳಿಸಲು ಮುಂದಾಗಿರುವ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ದೈಹಿಕ ಶಿಕ್ಷಣಕ್ಕೆ ಮೀಸಲಾಗಿದ್ದ ಅವಧಿಯಲ್ಲಿ ಮೌಲ್ಯ ಶಿಕ್ಷಣವನ್ನು ಕಲ್ಪಿಸಲು ಮುಂದಾಗಿರುವುದರಿಂದ ದೈಹಿಕ ಶಿಕ್ಷಣ ಸಂಪೂರ್ಣವಾಗಿ ನೇಪಥ್ಯಕ್ಕೆ ಸರಿಯುವ ಆತಂಕೆ ಸೃಷ್ಟಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದೆಯೇ; | ಸರ್ಕಾರದ ಆದೇಶ ಸಂಖ್ಯೆ: ಇಪಿ 116 ಎಂಪಿಇ 2025, ದಿನಾಂಕ: 02.02.2026 ರ ಸರ್ಕಾರದ ಆದೇಶದಲ್ಲಿ ಸರ್ಕಾರಿ ಶಾಲೆಗಳ 1 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ದೈಹಿಕ ಶಿಕ್ಷಣ ಪಠ್ಯವಸ್ತುವನ್ನು ಒಳಗೊಂಡಂತೆ ಮೌಲ್ಯ ಶಿಕ್ಷಣ ಪಠ್ಯ ಪುಸ್ತಕವನ್ನು ಮುದ್ರಿಸಿ ವಿತರಿಸುವ ಬಗ್ಗೆ ಆದೇಶಿಸಲಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ಪ್ರಸ್ತುತ ದಿನದಲ್ಲಿ ಮೌಲ್ಯ ಶಿಕ್ಷಣವೆಂಬ ನೆಪದಲ್ಲಿ ಮಕ್ಕಳನ್ನು ಕ್ಲಾಸ್ ರೂಮ್ ನಲ್ಲಿ ಕೂರಿಸುವುದರಿಂದ ಶಿಕ್ಷಣದ ಮೂಲಕ ಮಕ್ಕಳ ಸರ್ವಾಂಗೀಣ ವಿಕಾಸ ಎಂಬ ಪರಿಕಲ್ಪನೆಗೆ ಕೊಡಲಿ ಪೆಟ್ಟು ಬೀಳುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯವು ದೈಹಿಕ ಶಿಕ್ಷಣದಲ್ಲಿ ಆರೋಗ್ಯ, ಯೋಗ, ಕ್ರೀಡೆ ಮೌಲ್ಯ ಮತ್ತು ನೈರ್ಮಲ್ಯದ ವಿಷಯಗಳನ್ನು ಸೇರ್ಪಡೆಗೊಳಿಸಿ ಸಮಗ್ರವಾಗಿ ದೈಹಿಕ ಶಿಕ್ಷಣವನ್ನು ಬೋಧಿಸುವ, ಕ್ರೀಡೆ ಸಂಘಟಿಸುವ ಕಾರ್ಯವನ್ನು ಗೌರವಿಸುತ್ತಾ ಬಂದಿರುತ್ತದೆ. ಸರ್ಕಾರದ ಆದೇಶದಂತೆ, ಪ್ರಸ್ತುತ ಮೌಲ್ಯ ಶಿಕ್ಷಣ ಪಠ್ಯಪುಸ್ತಕದಲ್ಲಿ ದೈಹಿಕ ಶಿಕ್ಷಣ ಪಠ್ಯ ಪುಸ್ತಕದಲ್ಲಿನ ಎಲ್ಲಾ ವಿಷಯಗಳ ತಾತ್ವಿಕ ಹಾಗೂ ಪ್ರಾಯೋಗಿಕ ಸಾರಂಶಗಳನ್ನು ಅಳವಡಿಸಲಾಗಿರುತ್ತದೆ. ಚಾಲ್ತಿಯಲ್ಲಿದ್ದ ದೈಹಿಕ ಶಿಕ್ಷಣ ಪಠ್ಯ ಪುಸ್ತಕಗಳನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಿ ಲಭ್ಯಗೊಳಿಸಲಾಗುವುದು. ಶಾಲಾ ತರಗತಿ ಪ್ರಕ್ರಿಯೆಯಲ್ಲಿ ದೈಹಿಕ ಶಿಕ್ಷಣದ ಅವಧಿಗಳು ಮುಂದುವರೆಯುತ್ತವೆ.<br><br>ಈ ಹಿಂದಿನಂತೆಯೇ ದೈಹಿಕ ಶಿಕ್ಷಣಕ್ಕೆ ಹೆಚ್ಚಿನ ಮಹತ್ವವನ್ನು ನೀಡಿ ದೈಹಿಕ ಶಿಕ್ಷಣದೊಂದಿಗೆ ಮೌಲ್ಯ ಶಿಕ್ಷಣವನ್ನು ಒಳಗೊಂಡಂತೆ ಮಗುವಿನ ಸರ್ವಾಂಗೀಣ ಅಭಿವೃದ್ಧಿಗೆ ಕ್ರಮ ವಹಿಸಲಾಗಿರುತ್ತದೆ. |

<table>
<tr><td></td><td></td><td>ಮೌಲ್ಯ ಶಿಕ್ಷಣ ಪಠ್ಯದಲ್ಲಿನ ದೈಹಿಕ, ಆರೋಗ್ಯ ಹಾಗೂ ಯೋಗ ವಿಷಯಗಳಿಗೆ ಸಂಬಂಧಿಸಿದಂತೆ, ದೈಹಿಕ ಶಿಕ್ಷಣ ಶಿಕ್ಷಕರೇ ಬೋಧನೆಯನ್ನು ಕೈಗೊಳ್ಳಬೇಕಿರುತ್ತದೆ. ಉಳಿದ ಮೌಲ್ಯ ವಿಷಯಗಳನ್ನು ಆಯಾ ವಿಷಯಕ್ಕೆ ಸಂಬಂಧಿಸಿದ ಶಿಕ್ಷಕರ ಮೂಲಕ ಕಲಿಕೆಯನ್ನು ಅನುಕೂಲಿಸಲು ಯೋಜಿಸಲಾಗಿದೆ. ಮಕ್ಕಳ ಕ್ರೀಡಾ ಅವಧಿಗಳು ಎಂದಿನಂತೆಯೇ ಮುಂದುವರೆದಿರುತ್ತವೆ.</td></tr>
<tr><td>ಇ)</td><td>ಈಗಾಗಲೇ ಕೋವಿಡ್ ಬಳಿಕ ಮಕ್ಕಳು ಆನ್‌ಲೈನ್ ನಲ್ಲೇ ಅತೀ ಹೆಚ್ಚುಸಮಯ ಕಳೆಯುತ್ತಿದ್ದು,ಮಕ್ಕಳ ದೈಹಿಕ ಸಾಮರ್ಥ್ಯ ಗಣನೀಯವಾಗಿ ಕುಂದುತ್ತಿದ್ದು ಈಗ ಈ ನಿರ್ಧಾರದಿಂದ ಮಕ್ಕಳ ಇತರೆ ರಚನಾತ್ಮಕ ಚಟುವಟಿಕೆಗಳಿಂದ ಅವರನ್ನು ಶಾಶ್ವತವಾಗಿ ದೂರ ಮಾಡಿ ಜಡತ್ವಕ್ಕೆ ದೂಡಿದಂತಾಗುವುದಿಲ್ಲವೇ?</td><td rowspan="2">ಮೌಲ್ಯ ಶಿಕ್ಷಣ ಪುಸ್ತಕದಲ್ಲಿ ದೈಹಿಕ ಶಿಕ್ಷಣ ಪಠ್ಯಪುಸ್ತಕದಲ್ಲಿನ ಎಲ್ಲಾ ವಿಷಯಗಳ ತಾತ್ವಿಕ ಹಾಗೂ ಪ್ರಾಯೋಗಿಕ ಸಾರಾಂಶಗಳನ್ನು ಅಳವಡಿಸಲಾಗಿರುತ್ತದೆ. ಒಟ್ಟಾರೆ ಮೌಲ್ಯ ಶಿಕ್ಷಣ ಪುಸ್ತಕವು ದೈಹಿಕ, ಮಾನಸಿಕ, ಸಾಮಾಜಿಕ, ಭಾವನಾತ್ಮಕ, ವೈಜ್ಞಾನಿಕ ಮನೋಭಾವ ಮತ್ತು ಸೃಜನಾತ್ಮಕತೆ, ಸುಸ್ಥಿರ ಜೀವನ ಮತ್ತು ಪರಿಸರ ಜಾಗೃತಿ, ನಾಗರೀಕ ಜವಾಬ್ದಾರಿ, ಸುರಕ್ಷತಾ ಅಂಶಗಳು ಮತ್ತು ಇತರೆ ಮೌಲ್ಯಗಳನ್ನೊಳಗೊಂಡ ಚಟುವಟಿಕೆಗಳನ್ನು ಒಳಗೊಂಡಿರುತ್ತದೆ. ಈ ಹಿಂದಿನಂತೆಯೇ ದೈಹಿಕ ಶಿಕ್ಷಣದ ಅವಧಿಗಳನ್ನು ಮುಂದುವರೆಸಿ ವಿಷಯಕ್ಕೆ ಮಹತ್ವವನ್ನು ನೀಡುತ್ತಾ ಮೌಲ್ಯ ಶಿಕ್ಷಣವನ್ನು ಒಳಗೊಂಡಂತೆ ಮಗುವಿನ ಸರ್ವಾಂಗೀಣ ಅಭಿವೃದ್ಧಿಗೆ ಕ್ರಮ ವಹಿಸಲಾಗುತ್ತಿದೆ.</td></tr>
<tr><td>ಈ)</td><td>ದೈಹಿಕ ಶಿಕ್ಷಣ ವಿಷಯವನ್ನು ನೇಪಥ್ಯಕ್ಕೆ ಸೇರಿಸುವ ಈ ಆದೇಶವನ್ನು ಯಾವ ಕಾಲಮಿತಿಯೊಳಗೆ ವಾಪಸ್ ಪಡೆಯಲಾಗುವುದು ಹಾಗೂ ದೈಹಿಕ ಶಿಕ್ಷಣಕ್ಕೆ ಮತ್ತಷ್ಟು ಉತ್ತು ನೀಡುವ ಆದೇಶ ಹೊರಡಿಸಲಾಗುವುದೇ?</td></tr>
</table>

**ಸಂಖ್ಯೆ:ಇಪಿ 97 ಎಸ್‌ಇಎಸ್ 2026**

(ಎಸ್. ಮಧುಬಂಗಾರಪ್ಪ)
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು**